ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರವರಿ, 2021

ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಹೂಡಿದ ಬಂಡವಾಳ ಮತ್ತು ಉದ್ಯೋಗಾವಕಾಶಗಳು

ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-

209(232) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ನೋಂದಣಿಯಾದ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಮತ್ತು ಆ ಮೂಲಕ ಹೂಡಲಾದ ಬಂಡವಾಳದ ಪ್ರಮಾಣ ಎಷ್ಟು;

(ಆ) ಆ ಮೂಲಕ ಸೃಷ್ಟಿಸಿದ ಉದ್ಯೋಗಾವಕಾಶಗಳು ಮತ್ತು ಆ ಕುರಿತಾದ ಗುರಿ ಮತ್ತು ಸಾಧನೆಗಳೇನು;

(ಇ) ತುಮಕೂರು ಜಿಲ್ಲೆಯೂ ಸೇರಿದಂತೆ ಯಾವ ಯಾವ ಜಿಲ್ಲೆಗಳಲ್ಲಿ ಸದರಿ ಕೈಗಾರಿಕೆಗಳು ಸ್ಥಾಪಿಸಲ್ಪಟ್ಟಿವೆ;

(ಈ) ಅಭಿವೃದ್ಧಿಯಲ್ಲಿ ಹಿಂದುಳಿದ ಜಿಲ್ಲೆಗಳು ಎಂದು ಗುರುತಿಸಲ್ಪಟ್ಟ ಜಿಲ್ಲೆಗಳಲ್ಲಿ ಕೈಗಾರಿಕೆಗಳನ್ನು ನೋಂದಣಿ ಮಾಡಿಕೊಳ್ಳುವಲ್ಲಿ ಸರ್ಕಾರದ ಹೆಚ್ಚಿನ ಪ್ರೋತ್ಸಾಹದಾಯಕ ಕ್ರಮಗಳೇನು ?